# All India Radio: Bangalore
# National Bulletin In Kannada
# 30.06.2026  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**30.06.2026  19.35 p.m.**

**<><><><>**

ಮುಖ್ಯಾಂಶಗಳು

1. ಬಲವಾದ ರಕ್ಷಣಾ ಸಾಮರ್ಥ್ಯಗಳಿಗೆ ಬಲಿಷ್ಠ ಆರ್ಥಿಕತೆ ಅಡಿಪಾಯ - ರಕ್ಷಣಾ ಸಚಿವ ರಾಜನಾಥ್ ಸಿಂಗ್
2. ಇಪ್ಪತ್ತಾರು ದೇಶಗಳೊಂದಿಗೆ ವಲಸೆ ಮತ್ತು ಸಂಚಾರ ಪಾಲುದಾರಿಕೆ ಒಪ್ಪಂದಕ್ಕೆ ಭಾರತ ಸಹಿ - ಕೇಂದ್ರ ಸಚಿವ ಡಾ.ಎಸ್.ಜೈಶಂಕರ್
3. ಭಾರತಕ್ಕೆ ನಾಳೆಯಿಂದ ಮೂರು ದಿನ ಜಪಾನ್ ಪ್ರಧಾನಿ ಭೇಟಿ; ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗಿ
4. ಫಿಫಾ ವಿಶ್ವಕಪ್ ಫುಟ್ಬಾಲ್: ೧೬ರ ಸುತ್ತಿಗೆ ಮೊರಾಕೊ, ಪರಾಗ್ವೆ  ಮುನ್ನಡೆ

<><><><>

ಬಲವಾದ ರಕ್ಷಣಾ ಸಾಮರ್ಥ್ಯಗಳಿಗೆ ಬಲಿಷ್ಠ ಆರ್ಥಿಕತೆ ಅಡಿಪಾಯ ರೂಪಿಸುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಗುಜರಾತ್‌ನ ವಡೋದರಾದಲ್ಲಿ ನಡೆದ ವೈಬ್ರಂಟ್ ಗುಜರಾತ್ ಪ್ರಾದೇಶಿಕ ಸಮ್ಮೇಳನದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರಾಸಾಯನಿಕಗಳು, ಎಲೆಕ್ಟ್ರಾನಿಕ್ಸ್, ಹಡಗು ನಿರ್ಮಾಣ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಬಲವಾದ ಉಪಸ್ಥಿತಿಯೊಂದಿಗೆ ಗುಜರಾತ್ ಶೀಘ್ರದಲ್ಲೇ ರಕ್ಷಣಾ ಉತ್ಪಾದನೆಗೆ ಜಾಗತಿಕ ಕೇಂದ್ರವಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

೨೦೧೪ರಲ್ಲಿ ಸುಮಾರು ೪೬ ಸಾವಿರ ಕೋಟಿ ರೂಪಾಯಿ ಇದ್ದ ಭಾರತದ ದೇಶೀಯ ರಕ್ಷಣಾ ಉತ್ಪಾದನೆಯು ಪ್ರಸ್ತುತ ೧.೭೮ ಲಕ್ಷ ಕೋಟಿ ರೂಪಾಯಿಗಳಿಗೆ ಗಮನಾರ್ಹವಾಗಿ ಹೆಚ್ಚಳವಾಗಿದೆ ಎಂದು ತಿಳಿಸಿದರು. ವಡೋದರಾದಲ್ಲಿ ಪ್ರಸ್ತುತ ಟಾಟಾ ಗ್ರೂಪ್ ಮತ್ತು ಏರ್‌ಬಸ್ ಜಂಟಿಯಾಗಿ ಸಿ-೨೯೫ ಸಾರಿಗೆ ವಿಮಾನವನ್ನು ತಯಾರಿಸುತ್ತಿವೆ. ಇದು ದೇಶದ ಏರೋಸ್ಪೇಸ್ ಪ್ರಯಾಣದಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಗುರುತಿಸುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮಾತನಾಡಿ, ಎರಡು ದಿನಗಳ ಕಾಲ ನಡೆದ ವೈಬ್ರಂಟ್ ಗುಜರಾತ್ ಪ್ರಾದೇಶಿಕ ಶೃಂಗಸಭೆಯಲ್ಲಿ ೩.೩೪ ಲಕ್ಷ ಕೋಟಿ ರೂಪಾಯಿ ಮೌಲ್ಯದ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ಮುಂಬರುವ ದಿನಗಳಲ್ಲಿ ಈ ಪ್ರದೇಶದಲ್ಲಿ ೧.೯೭ ಲಕ್ಷಕ್ಕೂ ಹೆಚ್ಚು ಉದ್ಯೋಗವಕಾಶಗಳು ಸೃಷ್ಟಿಯಾಗಲಿವೆ ಎಂದು ತಿಳಿಸಿದರು.

<><><>

ವಿದ್ಯಾರ್ಥಿಗಳು ಶಿಕ್ಷಣವನ್ನು ಸಮಾನ ಮತ್ತು ಎಲ್ಲರನ್ನೂ ಒಳಗೊಂಡ ಸಮಾಜ ನಿರ್ಮಿಸುವ ಸಾಧನವಾಗಿ ಬಳಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿಂದು ಕೇಂದ್ರ ಬುಡಕಟ್ಟು ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾವಂತ ಯುವಕರು ತಮ್ಮ ಸ್ವಂತ ಪ್ರಗತಿಗಾಗಿ ಮಾತ್ರ ಕೆಲಸ ಮಾಡಬಾರದು. ದುರ್ಬಲ ವರ್ಗಗಳನ್ನು ಮೇಲತ್ತಲು ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಲು ಶ್ರಮಿಸಬೇಕು ಎಂದು ಸಲಹೆ ನೀಡಿದರು. ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತದ ಗುರಿ ಸಾಧಿಸಲು ವಿದ್ಯಾರ್ಥಿಗಳು ಕೊಡುಗೆ ನೀಡಬೇಕು. ಶೈಕ್ಷಣಿಕ ಕಲಿಕೆಯನ್ನು ಪ್ರಾಯೋಗಿಕ ಜ್ಞಾನದೊಂದಿಗೆ ಸಂಯೋಜಿಸಬೇಕು ಹಾಗೂ ವೇಗವಾಗಿ ಬದಲಾಗುತ್ತಿರುವ ಪ್ರಪಂಚದ ಬೇಡಿಕೆಗಳನ್ನು ಪೂರೈಸಲು ಹೊಸ ಕೌಶಲ್ಯಗಳನ್ನು ಕಲಿಯಬೇಕು ಎಂದು ವಿದ್ಯಾರ್ಥಿಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ.

<><><>

ಭಾರತ ೨೬ಕ್ಕೂ ಹೆಚ್ಚು ದೇಶಗಳೊಂದಿಗೆ ವಲಸೆ ಮತ್ತು ಸಂಚಾರ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಕಾರ್ಯಕ್ರಮವೊಂದನ್ನು ಉದ್ದೇಶಿಸಿ ಮಾತನಾಡಿದ ಅವರು, ಅಕ್ರಮ ವಲಸೆ, ಶೋಷಣೆ, ಮಧ್ಯವರ್ತಿಗಳಿಂದ ವಂಚನೆ ಮತ್ತು ಮಾನವ ಕಳ್ಳ ಸಾಗಾಣೆ ಎದುರಿಸಲು ರಾಷ್ಟ್ರದ ಸಾಮೂಹಿಕ ಜವಾಬ್ದಾರಿ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಸುರಕ್ಷಿತ, ಕ್ರಮಬದ್ಧ ಮತ್ತು ಕಾನೂನುಬದ್ಧ ವಲಸೆ ಖಚಿಪಡಿಸಿಕೊಳ್ಳುವಲ್ಲಿ ದ್ವಿಪಕ್ಷೀಯ ಸಹಯೋಗದ ಅಗತ್ಯವನ್ನು ಭಾರತ ಗುರುತಿಸುತ್ತದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಹೇಳಿದರು.

<><><>

ಭಾರತೀಯ ಸೇನೆಯ ೩೧ನೇ ಮುಖ್ಯಸ್ಥರಾಗಿ ಜನರಲ್ ಧೀರಜ್ ಸೇಠ್ ಇಂದು ಅಧಿಕಾರ ವಹಿಸಿಕೊಂಡರು. ಇಂದು ನಿವೃತ್ತರಾದ ಜನರಲ್ ಉಪೇಂದ್ರ ದ್ವಿವೇದಿ ಅವರು ಜನರಲ್ ಧೀರಜ್ ಸೇಠ್ ಅವರಿಗೆ ಅಧಿಕಾರ ಹಸ್ತಾಂತರಿಸಿದರು. ಜನರಲ್ ಧೀರಜ್ ಸೇಠ್ ಅವರು, ಪುಣೆಯ ಖಡಕ್‌ವಾಸ್ಲಾದ ರಾಷ್ಟ್ರೀಯ ರಕ್ಷಣಾ ಅಕಾಡೆಮಿಯ ಹಳೆಯ ವಿದ್ಯಾರ್ಥಿಯಾಗಿದ್ದು, ೧೯೮೬ರ ಡಿಸೆಂಬರ್‌ನಲ್ಲಿ ಆರ್ಮರ್ಡ್ ಕಾರ್ಪ್ಸ್‌ಗೆ ನಿಯೋಜನೆಗೊಂಡರು. ಸುಮಾರು ೪ ದಶಕಗಳ ತಮ್ಮ ಮಿಲಿಟರಿ ವೃತ್ತಿ ಜೀವನದಲ್ಲಿ ಅವರು, ಕಾರ್ಯಾಚರಣೆ, ಕಾರ್ಯತಂತ್ರ, ಸಾಮರ್ಥ್ಯ ಅಭಿವೃದ್ಧಿ ಮತ್ತು ಸಾಂಸ್ಥಿಕ ಕ್ಷೇತ್ರಗಳಲ್ಲಿ ವ್ಯಾಪಕ ಅನುಭವ ಹೊಂದಿದ್ದಾರೆ. ಭಾರತೀಯ ಸೇನೆಯ ಯುದ್ಧ ಪರಿಣಾಮಕಾರಿತ್ವ ಮತ್ತು ದೀರ್ಘಕಾಲಿನ ರೂಪಾಂತರಕ್ಕೆ ಗಮನಾರ್ಹ ಕೊಡುಗೆ ನೀಡಿದ್ದಾರೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ನವದೆಹಲಿಯಲ್ಲಿ ವಿದೇಶಿ ಕೊಡುಗೆ ನಿಯಂತ್ರಣ ಕಾಯ್ದೆ ೨.೦ ಪೋರ್ಟಲ್ ಮತ್ತು ಎಲೆಕ್ಟ್ರಾನಿಕ್ ಓವರ್‌ಸೀಸ್ ಸಿಟಿಜನ್ ಆಫ್ ಇಂಡಿಯಾ ಕಾರ್ಡ್‌ಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಮಿತ್ ಶಾ, ಎರಡೂ ಉಪಕ್ರಮಗಳು ನಾಗರಿಕ ಸೇವೆಗಳನ್ನು ಸುಧಾರಿಸುತ್ತವೆ. ಎಫ್‌ಸಿಆರ್‌ಎ ಪೋರ್ಟಲ್ ಮೂಲಕ ದೇಣಿಗೆ ಪಡೆಯುವವರು ಎದುರಿಸುತ್ತಿರುವ ತೊಂದರೆಗಳನ್ನು ಪರಿಹರಿಸುತ್ತವೆ. ತಪ್ಪು ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕಣ್ಗಾವಲು ವ್ಯವಸ್ಥೆಯನ್ನು ಸ್ಥಾಪಿಸಲಾಗುತ್ತದೆ ಮತ್ತು ದೇಶವು ಹೆಚ್ಚು ಸುರಕ್ಷಿತವಾಗುತ್ತದೆ ಎಂದು ಹೇಳಿದರು. ಒಸಿಐ ವ್ಯವಸ್ಥೆಯಲ್ಲಿ ಎದುರಿಸುತ್ತಿರುವ ಆರಂಭಿಕ ಸಮಸ್ಯೆಗಳನ್ನು ಹೊಸ ವ್ಯವಸ್ಥೆಯಲ್ಲಿ ಪರಿಹರಿಸಲಾಗಿದೆ. ಇದು ೫೦ ಲಕ್ಷಕ್ಕೂ ಹೆಚ್ಚು ಒಸಿಐ ಕಾರ್ಡ್‌ದಾರರಿಗೆ ಹೆಚ್ಚಿನ ಅನುಕೂಲವನ್ನು ತರುತ್ತದೆ ಎಂದರು. ವಿದೇಶಿ ಕೊಡುಗೆ ನಿಯಂತ್ರಣ ಕಾಯ್ದೆಯಡಿಯಲ್ಲಿ ಅನುಸರಣೆಯನ್ನು ಸರಳಗೊಳಿಸಲು ಮತ್ತು ಮೇಲ್ವಿಚಾರಣೆ ಹಾಗೂ ಜಾರಿ ಕಾರ್ಯವಿಧಾನವನ್ನು ಬಲಪಡಿಸಲು ಎಫ್‌ಸಿಆರ್‌ಎ ೨.೦ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಅರ್ಜಿಗಳು, ನವೀಕರಣಗಳು, ವಾರ್ಷಿಕ ರಿಟರ್ನ್ಸ್ ಮತ್ತು ಇತರ ಸೇವೆಗಳಿಗೆ ಸಂಬಂಧಿಸಿದ ಎಲ್ಲಾ ಪ್ರಮುಖ ಪ್ರಕ್ರಿಯೆಗಳನ್ನು ಈಗ ಆನ್‌ಲೈನ್ ವ್ಯವಸ್ಥೆಯ ಮೂಲಕ ಸಂಪೂರ್ಣವಾಗಿ ಡಿಜಿಟಲ್ ಮಾಡಲಾಗಿದೆ ಎಂದು ಸಚಿವ ಅಮಿತ್ ಶಾ ತಿಳಿಸಿದರು.

<><><><>

ದೇಶಾದ್ಯಂತ ಅಪಘಾತ ವಲಯಗಳು ಮತ್ತು ಭೂಕುಸಿತ ಸಂಭವಿಸುವ ಪ್ರದೇಶಗಳನ್ನು ಕೇಂದ್ರ ಸರ್ಕಾರ ಗುರುತಿಸಿದ್ದು, ೫೦ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಸುಧಾರಣಾ ಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ರಸ್ತೆ ಸುರಕ್ಷತೆ ಕುರಿತಾದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಸೂಕ್ತ ಸೂಚನಾ ಫಲಕಗಳು, ಪಥಗಳು ಮತ್ತು ಕೆಳಸೇತುವೆಗಳು ಸೇರಿದಂತೆ ಅಂತಾರಾಷ್ಟ್ರೀಯ ಗುಣಮಟ್ಟದ ರಸ್ತೆಗಳನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಗಳು ನಡೆಯುತ್ತಿವೆ ಎಂದು ಹೇಳಿದರು. ರಸ್ತೆ ಸುರಕ್ಷಿತ ಉತ್ತೇಜಿಸುವಲ್ಲಿ ಸಾರ್ವಜನಿಕರ ಭಾಗವಹಿಸುವಿಕೆ ಅತ್ಯಗತ್ಯ. ವಾಹನ ಚಾಲಕರು ಸಂಚಾರ ನಿಯಮಗಳನ್ನು ಪಾಲಿಸಬೇಕು. ಅತಿ ವೇಗದ ಚಾಲನೆಯನ್ನು ತಪ್ಪಿಸಬೇಕು. ಹೆಲ್ಮೆಟ್ ಮತ್ತು ಸೀಟ್‌ಬೆಲ್ಟ್‌ಗಳನ್ನು ಧರಿಸಬೇಕು ಮತ್ತು ವಾಹನ ಚಲಾಯಿಸುವಾಗ ಮೊಬೈಲ್ ಫೋನ್ ಬಳಕೆ ತಪ್ಪಿಸಬೇಕು ಎಂದು ಸಚಿವ ನಿತಿನ್ ಗಡ್ಕರಿ ಸಲಹೆ ನೀಡಿದರು.

<><><><>

ಜಪಾನ್ ಪ್ರಧಾನಿ ಸನೇ ತಕೈಚಿ ಅವರು, ಮೂರು ದಿನಗಳ ಭಾರತ ಭೇಟಿಗಾಗಿ ನಾಳೆ ಸಂಜೆ ನವದೆಹಲಿಗೆ ಆಗಮಿಸಲಿದ್ದಾರೆ. ಅವರು, ಪ್ರಮುಖವಾಗಿ ೧೮ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ಶೃಂಗಸಭೆಯು ಉಭಯ ದೇಶಗಳಿಗೆ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಅವಕಾಶ ಒದಗಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಇದು ಜಪಾನ್ ಪ್ರಧಾನಿ ಸನೇ ತಕೈಚಿ ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಇದು ಭಾರತ-ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಎರಡೂ ದೇಶಗಳ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

<><><><>

ಹಣಕಾಸು ಕ್ರಿಯಾಪಡೆಗೆ ತಮ್ಮ ಬಲವಾದ ಬೆಂಬಲವನ್ನು ಭಾರತ ಪುನರುಚ್ಚರಿಸಿದೆ. ಭಯೋತ್ಪಾದನೆಗೆ ಹಣಕಾಸು ನೆರವು ಮತ್ತು ಹಣ ವರ್ಗಾವಣೆಯ ವಿರುದ್ಧದ ಜಾಗತಿಕ ಹೋರಾಟದಲ್ಲಿ ಇದು ಅನಿವಾರ್ಯವಾಗಿದೆ ಎಂದು ಭಾರತ ಹೇಳಿದೆ. ವಿಶ್ವಸಂಸ್ಥೆಯ

ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್, ಎಫ್‌ಎಟಿಎಫ್‌ನ ವಿಶ್ವಾಸಾರ್ಹತೆ ಪ್ರಶ್ನಿಸುವ ಪ್ರಯತ್ನಗಳು ನಿಜವಾದ ಕಾಳಜಿಯ ವಿಷಯವಾಗಿದೆ. ಭಯೋತ್ಪಾದನೆಗೆ ಹಣಕಾಸು ಒದಗಿಸುವುದರ ವಿರುದ್ಧ ಕ್ರಮವನ್ನು ಬಲಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

<><><><>

ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯಲ್ಲಿ ಮೊರಾಕೊ ಮತ್ತು ಪರಾಗ್ವೆ ತಂಡಗಳು ೧೬ರ ಸುತ್ತಿಗೆ ಮುನ್ನಡೆದಿವೆ. ಮೆಕ್ಸಿಕೋದ ಗ್ವಾಡಾಲುಪೆಯಲ್ಲಿ ನಡೆದ ರೋಮಾಂಚಕ ಪಂದ್ಯದಲ್ಲಿ ೧-೧ ಡ್ರಾ ನಂತರ ಮೊರಾಕೊ ತಂಡ ಪೆನಾಲ್ಟಿ ಶೂಟೌಟ್‌ನಲ್ಲಿ ನೆದರ್‌ಲೆಂಡ್ಸ್ ತಂಡವನ್ನು ೩-೨ ಗೋಲುಗಳಿಂದ ಮಣಿಸಿತು. ಅಮೆರಿಕದ ಬೋಸ್ಟಾನ್‌ನಲ್ಲಿ ನಡೆದ ಪಂದ್ಯದ ಪೆನಾಲ್ಟಿ ಶೂಟೌಟ್‌ನಲ್ಲಿ ಜರ್ಮನಿ ವಿರುದ್ಧ ೩-೪ ಗೋಲುಗಳಿಂದ ಪರಾಗ್ವೆ ತಂಡ ಜಯಗಳಿಸಿತು. ಅಮೆರಿಕದ ಟೆಕ್ಸಾಸ್‌ನಲ್ಲಿ ಇಂದು ರಾತ್ರಿ ನಡೆಯುವ ಪಂದ್ಯದಲ್ಲಿ ಐವರಿ ಕೋಸ್ಟಾ ತಂಡ ನಾರ್ವೆ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦.೩೦ಕ್ಕೆ ಆರಂಭವಾಗಲಿದೆ.

<><><><>

ಜಪಾನ್‌ನ ಐಚಿ-ನಗೋಯಾದಲ್ಲಿ ನಡೆಯಲಿರುವ ೨೦೨೬ರ ಏಷ್ಯನ್ ಗೇಮ್ಸ್ ಕ್ರೀಡಾಕೂಟಕ್ಕಾಗಿ ಬಿಸಿಸಿಐ ಇಂದು ೧೫ ಸದಸ್ಯರ ಭಾರತ ಮಹಿಳಾ ಕ್ರಿಕೆಟ್ ತಂಡವನ್ನು ಪ್ರಕಟಿಸಿದೆ. ತಂಡವನ್ನು ಹರ್ಮನ್ ಪ್ರೀತ್ ಕೌರ್ ಮುನ್ನಡೆಸಲಿದ್ದಾರೆ. ಜಪಾನ್‌ನಲ್ಲಿ ಈ ಕ್ರೀಡಾಕೂಟ ಸೆಪ್ಟೆಂಬರ್ ೧೯ ರಂದು ಆರಂಭವಾಗಲಿದ್ದು, ಅಕ್ಟೋಬರ್ ೪ ರವರೆಗೆ ನಡೆಯಲಿದೆ. ಇತ್ತೀಚೆಗೆ ಮುಕ್ತಾಯಗೊಂಡ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್‌ನಲ್ಲಿ ಆಡಿದ್ದ ಬಹುತೇಕ ಆಟಗಾರ್ತಿಯರನ್ನೇ ಆಯ್ಕೆ ಸಮಿತಿ ಉಳಿಸಿಕೊಂಡಿದ್ದು, ಗಾಯಾಳು ಯಾಸ್ತಿಕಾ ಭಾಟಿಯಾ ಬದಲಿಗೆ ಬ್ಯಾಟರ್ ಮತ್ತು ವಿಕೆಟ್ ಕೀಪರ್ ಜಿ ಕಮಲಿನಿ ಅವರಿಗೆ ತಂಡದಲ್ಲಿ ಸ್ಥಾನ ಕಲ್ಪಿಸಲಾಗಿದೆ. ಕಳೆದ ಬಾರಿ ಚೀನಾದಲ್ಲಿ ನಡೆದಿದ್ದ ಏಷ್ಯನ್ ಗೇಮ್ಸ್‌ನಲ್ಲಿ ಐತಿಹಾಸಿಕ ಚಿನ್ನದ ಪದಕ ಗೆದ್ದಿದ್ದ ಭಾರತ ತಂಡ, ಈ ಬಾರಿ ಹಾಲಿ ಚಾಂಪಿಯನ್ ಆಗಿ ಕಣಕ್ಕಿಳಿಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>